ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಶುಕ್ರವಾರ, ದಿನಾಂಕ : 26ನೇ ಜುಲೈ, 2019

ಬೃಹತ್ ಬೆಂಗಳೂರು ಪಾಲಿಕೆ ವ್ಯಾಪ್ತಿಯ ಅಕ್ರಮ ಜಮೀನಿನ ಬಗ್ಗೆ

ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು):-

628 (750) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ನೌಕರರ ಕ್ಷೇಮಾಭಿವೃದ್ಧಿ ಸಂಘಕ್ಕೆ ಲಿಂಗಧೀರನಹಳ್ಳಿ ಗ್ರಾಮದ ಸರ್ವೆ ನಂ. 1/4, 7/1, 7/5, 7/6, 7/8 ಮತ್ತು 7/9 ರಲ್ಲಿರುವ ಜಮೀನುಗಳನ್ನು ನೋಂದಾಯಿತ ಕ್ರಯಪತ್ರ ಮಾಡಿಕೊಡದೆ, ಸದರಿ ಜಮೀನುಗಳನ್ನು ಪರಿಷ್ಕೃತ ಬಡಾವಣೆ ನಕ್ಷೆಯಲ್ಲಿ ಸೇರಿಸಲು ಅವಕಾಶವಿದೆಯೇ; (ವಿವರ ನೀಡುವುದು)

(ಆ) ಹಾಗಿದ್ದಲ್ಲಿ, ನೋಂದಾಯಿತ ಕ್ರಯಪತ್ರ ಮಾಡಿಕೊಡದೆ ಪರಿಷ್ಕೃತ ಬಡಾವಣೆ ನಕ್ಷೆಯಲ್ಲಿ ಅಕ್ರಮವಾಗಿ ಸೇರಿಸಿರುವವರ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ಒದಗಿಸುವುದು)

(ಇ) ಪ್ರಾಧಿಕಾರದ ನಿಯಮಾವಳಿಗಳನ್ವಯ ಸಿ.ಎ. ನಿವೇಶನಗಳನ್ನು ಹಂಚಿಕೆ ಮಾಡಲು ಕೈಗೊಳ್ಳುವ ಪ್ರಕ್ರಿಯೆಯ ವಿಧಾನಗಳನ್ನು ತಿಳಿಸುವುದು ಮತ್ತು ನಿಯಮದ ಪ್ರತಿ ಒದಗಿಸುವುದು ;

(ಈ) ಲಿಂಗಧೀರನಹಳ್ಳಿ ಬಡಾವಣೆಯ ಸುಮಾರು ಒಂದು ಎಕರೆ ವಿಸ್ತೀರ್ಣದ ಸಿ.ಎ. ನಿವೇಶನವನ್ನು ಯಾರಿಗೆ ಹಂಚಿಕೆ ಮಾಡಲಾಗಿದೆ? (ಪ್ರಾಧಿಕಾರದ ಮಂಡಳಿ ಸಭೆಯಲ್ಲಿ ಅನುಮತಿಸಿದ ಠರಾವಿನ ಪ್ರತಿ ಮತ್ತು ಗುತ್ತಿಗೆ ಕರಾರುಪತ್ರ ಒದಗಿಸುವುದು)